# ಕರ್ನಾಟಕ ವಿಧಾನಸಭೆ

ಹದಿಮೂರನೇ ವಿಧಾನಸಭೆ

(ಒಂಭತ್ತನೇ ಅಧಿವೇಶನ)

**ಕಾರ್ಯಕಲಾಪಗಳ ಪಟ್ಟಿ**

ಸೋಮವಾರ, ದಿನಾಂಕ 14ನೇ ಮಾರ್ಚ್, 2011

(ಸಮಯ: ಬೆಳಿಗ್ಗೆ 11.00 ಗಂಟೆಗೆ)

– – –

## 1. ಪ್ರಶ್ನೋತ್ತರ

| | | |
|---|---|---|
| **ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು** | : | **ಒಂಭತ್ತನೇ ಪಟ್ಟಿ** |
| **ಆ) ದಿನಾಂಕ 8ನೇ ಮಾರ್ಚ್, 2011ರ ಏಳನೇ ಪಟ್ಟಿಯಿಂದ ವರ್ಗಾವಣೆಗೊಂಡ ಶ್ರೀ ಅಪ್ಪಾಜಿ ಶಂಕರರಾವ್ ನಾಡಗೌಡ ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 102(827)** | : | **ಕಂದಾಯ ಸಚಿವರು** |
| **ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು** | : | **ಒಂಭತ್ತನೇ ಪಟ್ಟಿ** |

## 2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು) ಅವರು:–**

ಅ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ ಭಾರತದ ನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರು 31ನೇ ಮಾರ್ಚ್ 2010ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ (ಅ) ರಾಜ್ಯ ಸರ್ಕಾರದ ಹಣಕಾಸು ವ್ಯವಹಾರಗಳು, (ಆ) ಸಿವಿಲ್, (ಇ) ರಾಜಸ್ವ ಸ್ವೀಕೃತಿಗಳು ಹಾಗೂ (ಈ) ವಾಣಿಜ್ಯ ವರದಿಗಳನ್ನು ಸಭೆಯ ಮುಂದಿಡುವುದು.

## 3. ಶಾಸನ ರಚನೆ

### ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

**1. ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕ, 2011**

**ಶ್ರೀ ಲಕ್ಷ್ಮಣ ಎಸ್. ಸವದಿ, (ಸಹಕಾರ ಮತ್ತು ಕೃಷಿ ಮಾರುಕಟ್ಟೆ ಸಚಿವರು)ಅವರು:–**

ಅ. ವಿಧಾನಪರಿಷತ್ತಿನಿಂದ ಅಂಗೀಕಾರವಾದ ರೂಪದಲ್ಲಿರುವ 2011ನೇ ಸಾಲಿನ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪು.ತಿ.ನೋ.

**2. ಕಾರ್ಖಾನೆಗಳ (ಕರ್ನಾಟಕ ತಿದ್ದುಪಡಿ) ವಿಧೇಯಕ, 2011**

**ಶ್ರೀ ಬಿ.ಎನ್. ಬಚ್ಚೇಗೌಡ, (ಕಾರ್ಮಿಕ ಸಚಿವರು) ಅವರು:-**

ಅ. 2011ನೇ ಸಾಲಿನ ಕಾರ್ಖಾನೆಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**3. ಕರ್ನಾಟಕ ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕ, 2011**

**ಶ್ರೀ ಜಗದೀಶ್ ಶೆಟ್ಟರ್, (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರು:-**

ಅ. 2011ನೇ ಸಾಲಿನ ಕರ್ನಾಟಕ ಪಂಚಾಯತ್‌ರಾಜ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**4. ಕರ್ನಾಟಕ ಗೃಹ ರಕ್ಷಕ ದಳ (ತಿದ್ದುಪಡಿ) ವಿಧೇಯಕ, 2011**

**ಶ್ರೀ ಆರ್. ಅಶೋಕ್ ( ಗೃಹ ಮತ್ತು ಸಾರಿಗೆ ಸಚಿವರು) ಅವರು:-**

ಅ. 2011ನೇ ಸಾಲಿನ ಕರ್ನಾಟಕ ಗೃಹ ರಕ್ಷಕ ದಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**5. ಕರ್ನಾಟಕ ರಾಜ್ಯ ನವೀನಾತ್ಮಕ ವಿಶ್ವವಿದ್ಯಾಲಯಗಳ ವಿಧೇಯಕ, 2011**

**ಶ್ರೀ ಡಾ॥ ವಿ.ಎಸ್. ಆಚಾರ್ಯ, ( ಉನ್ನತ ಶಿಕ್ಷಣ, ಯೋಜನಾ, ಸಾಂಖ್ಯಿಕ, ಮುಜರಾಯಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು) ಅವರು:-**

ಅ. 2011ನೇ ಸಾಲಿನ ಕರ್ನಾಟಕ ರಾಜ್ಯ ನವೀನಾತ್ಮಕ ವಿಶ್ವವಿದ್ಯಾಲಯಗಳ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**6. ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ವಿಧೇಯಕ, 2011**

**ಶ್ರೀ, ಎಸ್. ಸುರೇಶ್‌ಕುಮಾರ್, ( ನಗರಾಭಿವೃದ್ಧಿ, ಪೌರಾಡಳಿತ, ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆ ಮಂಡಳಿ ಸಚಿವರು) ಅವರು:-**

ಅ. 2011ನೇ ಸಾಲಿನ ಭಾರತ ರಾಷ್ಟ್ರೀಯ ಕಾನೂನು ವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**7. ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಹಾಗೂ ನಿಯಂತ್ರಣ) ವಿಧೇಯಕ, 2011**

**ಶ್ರೀ ಗೋವಿಂದ ಎಂ. ಕಾರಜೋಳ, (ಸಣ್ಣ ನೀರಾವರಿ,ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರು) ಅವರು:-**

ಅ. 2011ನೇ ಸಾಲಿನ ಕರ್ನಾಟಕ ಅಂತರ್ಜಲ (ಅಭಿವೃದ್ಧಿ ಹಾಗೂ ನಿಯಂತ್ರಣ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ. ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಪು.ತಿ.ನೋ.

## 4. ಗಮನ ಸೆಳೆಯುವ ಸೂಚನೆಗಳು

1. ಶ್ರೀ ವೆಂಕಟರಾವ್ ನಾಡಗೌಡ ಅವರು ಬೀದರ್-ಶ್ರೀರಂಗಪಟ್ಟಣ ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ ಸಿಂಧನೂರು-ಲಿಂಗಸಗೂರು ರಸ್ತೆ ಹಾಳಾಗಿ ಸಾರ್ವಜನಿಕರಿಗೆ ತೊಂದರೆಯಾಗಿರುವ ಬಗ್ಗೆ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

2. ಶ್ರೀ ಯು.ಟಿ. ಖಾದರ್ ಅವರು ಕರಾವಳಿ ಪ್ರದೇಶದ ರೈತರಿಗೆ ಪಶ್ಚಿಮ ವಾಹಿನಿ ಯೋಜನೆಯು ಅನುಷ್ಠಾನಗೊಳ್ಳದೇ ಇರುವುದರಿಂದ ತೀವ್ರ ತೊಂದರೆಯಾಗಿರುವ ಬಗ್ಗೆ ಸಣ್ಣ ನೀರಾವರಿ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಜವಳಿ ಸಚಿವರ ಗಮನ ಸೆಳೆಯುವುದು.

3. ಶ್ರೀ ಮಾಲೀಕಯ್ಯ ಗುತ್ತೇದಾರ್ ಅವರು ಗುಲ್ಬರ್ಗಾ-ಚೌಡಾಪುರ ರಸ್ತೆ ಹಾಳಾಗಿದ್ದು ಕಾಮಗಾರಿಯನ್ನು ಪ್ರಾರಂಭಿಸಲು ವಿಳಂಬವಾಗಿರುವ ಕುರಿತು ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

4. ಶ್ರೀ ನೆ.ಲ. ನರೇಂದ್ರಬಾಬು ಅವರು ಬೆಂಗಳೂರು ಸುತ್ತ-ಮುತ್ತಲಿನ ಕೆರೆಗಳಲ್ಲಿ ಜಲಮಾಲಿನ್ಯದಿಂದ ಆಗಿಂದಾಗ್ಗೆ ಮೀನುಗಳು ಸಾಯುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

5. ಶ್ರೀ ಎನ್. ಸಂಪಂಗಿ ಅವರು ಹಳೆಯ ಮೈಸೂರು ಸಂಸ್ಥಾನದ ವತಿಯಿಂದ ತಿರುಪತಿ ತಿರುಮಲ ದೇವಸ್ಥಾನಕ್ಕೆ ನೀಡಿದ ಭೂಮಿಯಲ್ಲಿ ವಸತಿ ಗೃಹ ಹಾಗೂ ಇತರ ಸೌಲಭ್ಯವನ್ನು ಒದಗಿಸುವ ನಿಟ್ಟಿನಲ್ಲಿ ಕಟ್ಟಡಗಳನ್ನು ನಿರ್ಮಿಸುವ ಬಗ್ಗೆ ಉನ್ನತ ಶಿಕ್ಷಣ ಮತ್ತು ಮುಜರಾಯಿ ಸಚಿವರ ಗಮನ ಸೆಳೆಯುವುದು.

6. ಶ್ರೀ ವೀರಭದ್ರಪ್ಪ ಹಾಲಹರವಿ ಅವರು ಹುಬ್ಬಳ್ಳಿ ನಗರದ ಸಿ.ಬಿ.ಟಿ. ಬಸ್ ನಿಲ್ದಾಣವನ್ನು ಬೆಂಗಳೂರಿನ ಶಿವಾಜಿನಗರದ ಮಾದರಿಯಲ್ಲಿ ಬಸ್ ನಿಲ್ದಾಣ ಮತ್ತು ವಾಣಿಜ್ಯ ಸಂಕೀರ್ಣ ನಿರ್ಮಿಸುವ ಬಗ್ಗೆ ಗೃಹ ಮತ್ತು ಸಾರಿಗೆ ಸಚಿವರ ಗಮನ ಸೆಳೆಯುವುದು.

7. ಡಾ॥ ಎಂ.ಸಿ. ಸುಧಾಕರ ಅವರು ಚಿಂತಾಮಣಿ ತಾಲ್ಲೂಕು ನೆಕ್ಕುಂದಿ ಗ್ರಾಮದ ಸರ್ವೇ ನಂ. 196ರಲ್ಲಿ 1.31 ಗುಂಟೆ ಸರ್ಕಾರಿ ತೋಪನ್ನು 2006ರಲ್ಲಿ ವಿವಿಧ ಉದ್ದೇಶಗಳಿಗೆ ಸರ್ವೇ ಮಾಡಿ ಖುಲ್ಲಾ ಪಡಿಸಲು ಕಂದಾಯ ಇಲಾಖೆಗೆ ಮನವಿ ಮಾಡಿದ್ದು ಈವರೆಗೂ ಕ್ರಮಕೈಗೊಳ್ಳದಿರುವ ಬಗ್ಗೆ ಕಂದಾಯ ಸಚಿವರ ಗಮನ ಸೆಳೆಯುವುದು.

8. ಶ್ರೀಯುತರಾದ ಶ್ರೀಕಾಂತ ಕುಲಕರ್ಣಿ ಮತ್ತು ಸಿದ್ದು ಸವದಿ ಅವರು ಘಂಡರಾಪೂರ ಒಪ್ಪಂದದ ಪ್ರಕಾರ ಜಮಖಂಡಿಯನ್ನು ಹೊಸ ಜಿಲ್ಲಾ ಕೇಂದ್ರ ಸ್ಥಾನವನ್ನಾಗಿ ಮಾಡುವ ಬಗ್ಗೆ ಕಂದಾಯ ಸಚಿವರ ಗಮನ ಸೆಳೆಯುವುದು.

9. ಶ್ರೀ ಕಿಮ್ಮನೆ ರತ್ನಾಕರ ಅವರು ಸರ್ಕಾರದ ವಿವಿಧ ಇಲಾಖೆಗಳಲ್ಲಿ ದಿನಗೂಲಿ ನೌಕರರು, ಖಾಯಂ ನೇಮಕಾತಿಗಾಗಿ ಅನೇಕ ವರ್ಷಗಳಿಂದ ಹೋರಾಟ ನಡೆಸುತ್ತಿದ್ದು ಸಚಿವ ಸಂಪುಟದ ಉಪಸಮಿತಿಯು ನೀಡಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

ಪು.ತಿ.ನೋ.

**5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ**

1. ಶ್ರೀಯುತರಾದ ಹೆಚ್.ಡಿ.ರೇವಣ್ಣ, ಹೆಚ್.ಕೆ. ಕುಮಾರಸ್ವಾಮಿ ಹಾಗೂ ಇತರರು ಲೋಕೋಪಯೋಗಿ ಇಲಾಖೆಯಲ್ಲಿ ಗುತ್ತಿಗೆದಾರರಿಗೆ ಹಣ ಪಾವತಿ ಮಾಡದಿರುವುದರ ವಿಚಾರದಲ್ಲಿ ನೀಡಿರುವ ಸೂಚನೆಯ ಬಗ್ಗೆ ಚರ್ಚೆ.

2. ಶ್ರೀಯುತರಾದ ಎ.ಎಸ್.ಪಾಟೀಲ್(ನಡಹಳ್ಳಿ) ಸಿದ್ದರಾಮಯ್ಯ, ಸಿ.ಎಸ್.ನಾಡಗೌಡ ಅವರು ಕೃಷ್ಣಾ ಜಲ ವಿವಾದ ನ್ಯಾಯಾಧೀಕರಣ ನೀಡಿರುವ ಅಂತಿಮ ತೀರ್ಪಿನ ವಿಚಾರದಲ್ಲಿ ಸೂಚನೆಯ ಬಗ್ಗೆ ಚರ್ಚೆ.

**ಎಸ್.ಬಿ. ಪಾಟೀಲ್**
ಕಾರ್ಯದರ್ಶಿ

---

*Raj N*

**ವಿಧಾನ ಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**
(www.kar.nic.in/kla)